# ಗೇರು ಸಂಶೋಧನಾ ನಿರ್ದೇಶನಾಲಯದಿಂದ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಕೃಷಿ ಸಲಕರಣೆಗಳ ವಿತರಣೆ



ಪುತ್ತೂರು: ಕೇಂದ್ರ ಸರಕಾರದ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಕೊಡಮಾಡುವ ಸವಲತ್ತುಗಳನ್ನು ಪುತ್ತೂರಿನ ಮೊಟ್ಟೆತ್ತಡ್ಕದ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಫಲಾನುಭವಿಗಳಿಗೆ ವಿತರಿಸಲಾಯಿತು. ಪುತ್ತೂರು ತಾಲೂಕು ಪಂಚಾಯತ್ ಅಧ್ಯಕ್ಷ ರಾಧಾಕೃಷ್ಣ ಬೋರ್ಕರ್ ವಿತರಿಸಿ ಮಾತನಾಡಿ ಪರಿಶಿಷ್ಟ ಜಾತಿಯವರು ಸಮಾಜದಲ್ಲಿ ಆತ್ಮಗೌರವದಿಂದ ಬಾಳಲು ಕೇಂದ್ರ ಸರ್ಕಾರ ಸಾಕಷ್ಟು ನೆರವನ್ನು ಕೊಡುತ್ತಿದೆ. ಅದನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಅಭಿವೃದ್ಧಿ ಹೊಂದಬೇಕು ಎಂದು ಆಶಿಸಿದರು. ಈ ಸಂದರ್ಭದಲ್ಲಿ ಆಯ್ದ ರೈತರಿಗೆ, ತೋಟಗಳಿಗೆ ಔಷಧಿ ಸಿಂಪಡಣಾ ಯಂತ್ರಗಳನ್ನು ಮತ್ತು ಮರವೇರುವ ಅಲ್ಯುಮಿನಿಯಂ ಏಣಿಗಳನ್ನು ಅವರು ವಿತರಿಸಿದರು. ಸರಕಾರದ ಎಲ್ಲಾ ಸವಲತ್ತುಗಳು ಸರಿಯಾದ ರೀತಿಯಲ್ಲಿ ತಿಳಿಯಬೇಕೆಂದಿದ್ದರೆ ರೈತರು ಗ್ರಾಮ ಸಭೆಗಳಲ್ಲಿ ಭಾಗಿಯಾಗುವುದು ಅತ್ಯಗತ್ಯವೆಂದು ಹೇಳಿದ ಅಧ್ಯಕ್ಷ ಬೋರ್ಕರ್, ನರೇಗದಂತಹ ಯೋಜನೆಗಳಲ್ಲಿ ನಮ್ಮ ಜಮೀನಿನಲ್ಲಿ ನಮ್ಮ ಕೆಲಸ ನಾವೇ ಮಾಡಿ ಸಂಭಾವನೆ ಪಡೆಯುವಂತಹ ವಿಶೇಷ ಅವಕಾಶಗಳಿವೆ. ಜೊತೆಗೆ ಗಂಗಾ ಕಲ್ಯಾಣದಂತಹ ಯೋಜನೆಯಿಂದ ಭೂ ಹಿಡುವಳಿ ಹೊಂದಿರುವವರಿಗೆ ಬಹಳಷ್ಟು ಪ್ರಯೋಜನವಾಗಿದೆ. ಪುತ್ತೂರಿನಲ್ಲಿರುವ ಹೆಮ್ಮೆಯ ಸಂಸ್ಥೆಯಾದ ಡಿಸಿಆರ್ ನಿಂದ ಇಂತಹ ಜನಹಿತ ಕೆಲಸಗಳು ನಡೆಯುತ್ತಿರುವುದು ತುಂಬಾ ಶ್ಲಾಘನೀಯ ಎಂದು ಹೇಳಿದರು.

ಸಂಸ್ಥೆಯ ನಿರ್ದೇಶಕ ಡಾ। ಯಂ. ಗಂಗಾಧರ ನಾಯಕ್ ಸ್ವಾಗತಿಸಿ ಮಾತನಾಡಿ ಸಂಸ್ಥೆಯಲ್ಲಿ ಕಳೆದ ಕೆಲವು ವರ್ಷದಿಂದ ನಡೆಯುತ್ತಿರುವ ಈ ಉಪಯೋಜನೆಗಳ ಕಾರ್ಯಕ್ರಮದ ಬಗ್ಗೆ ತಿಳಿಸಿ ಮುಂದಿನ ವರ್ಷದಲ್ಲಿ ಪರಿಶಿಷ್ಟ ಜಾತಿ ಹಾಗೂ ಬುಡಕಟ್ಟು ಜನಾಂಗದವರಿಗೆ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಯೋಜನೆಯಡಿಯಲ್ಲಿ ಬಹಳಷ್ಟು ಧನ ಸಹಾಯ ಕೇಂದ್ರದಿಂದ ಬಂದಿದ್ದು ಕಾರ್ಯಕ್ರಮವು ನಿರಂತರವಾಗಿ ನಡೆಯಲಿದೆಯೆಂದರು. ಗೇರು ಅಥವಾ ಇತರ ಕೃಷಿ ತೋಟಗಳ ನಿರ್ಮಾಣ, ನಿರ್ವಹಣೆ, ಬೇಕಾದ ಸಲಕರಣೆಗಳು, ಯಂತ್ರ ಉಪಕರಣಗಳು, ಕೋಳಿ, ಆಡು ಸಾಕಾಣಿಕೆ, ಹೈನುಗಾರಿಕೆ, ಜೇನು ಸಾಕಾಣಿ, ವೃತ್ತಿ ತರಬೇತಿ, ಟೈಲರಿಂಗ್ ಮುಂತಾದ ಕಸುಬು ಮಾಡುವವರಿಗೆ ಈ ಯೋಜನೆಗಳು ಜೀವನವನ್ನು ಸುಧಾರಿಸುವಲ್ಲಿ ಹೆಚ್ಚು ಸಹಾಯವಾಗಲಿದೆಯೆಂದರು. ಕಾರ್ಯಕ್ರಮ ಯೋಜಿಸಿ ನಿರೂಪಿಸಿದ ಯೋಜನೆಯ ಸಮನ್ವಯಕಾರ ಡಾ। ಈ. ಈರದಾಸಪ್ಪರವರು ಮಾತನಾಡಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಇದರ ಸದುಪಯೋಗ ಪಡೆಯುವಂತೆ ತಿಳಿಸಿ ವಂದಿಸಿದರು.